ಇ ಮತ್ತು ಈ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಸಾಮಾನ್ಯವಾಗಿ ರಾತ್ರಿ ವೇಳೆಯಲ್ಲಿ ಸಿಂಗಲ್ ಫೇಸ್ ಅಥವಾ ಮೂರು ಫೇಸ್‌ಗಳಲ್ಲಿ ವಿದ್ಯುತ್‌ನ್ನು ಒದಗಿಸಲಾಗುತ್ತಿದೆ ಬೇಸಿಗೆ ಕಾಲ ಮತ್ತು ಬರಗಾಲ ಪರಿಸ್ಥಿತಿಯಿಂದಲೂ ವಿದ್ಯುತ್ ಬೇಡಿಕೆ ರಾಜ್ಯದಲ್ಲಿ ದಿನೇ ದಿನೇ ಹೆಚ್ಚುತ್ತಿದೆ ಆದ್ದರಿಂದ ವಿದ್ಯುತ್ ಲಭ್ಯತೆಯ ಆಧಾರದ ಮೇಲೆ ಬೇಡಿಕೆಯನ್ನು ಸರಿದೂಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ

ವಿದ್ಯುತ್‌ನ ಗುಣಮಟ್ಟವನ್ನು ಸುಧಾರಿಸಲು ಹಾಗೂ ಓವರ್ ಲೋಡ್ ಸಮಸ್ಯೆಯನ್ನು ನಿವಾರಿಸಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ನಿಯಮಿತ 491 ಹೊಸ ವಿದ್ಯುತ್ ಉಪ ಕೇಂದ್ರಗಳನ್ನು ನಿರ್ಮಾಣ ಮಾಡುವ ಮಹತ್ವಾಕಾಂಕ್ಷೆ ಯೋಜನೆಯನ್ನು ಹೊಂದಿದ್ದು, ಇವುಗಳನ್ನು ಹಂತ ಹಂತವಾಗಿ ಕಾರ್ಯಾರಂಭಗೊಳಿಸುವ ಗುರಿಯನ್ನು ಹೊಂದಲಾಗಿದೆ

1534 (2213) ಶ್ರೀ ಸಿದ್ದು ಸಾವದಿ (ಜಮಖಂಡಿ) – ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ನಗರದಲ್ಲಿರುವ ಕ್ರೀಡಾಂಗಣದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಇದಕ್ಕಾಗಿ ಖರ್ಚಾದ ಹಣವೆಷ್ಟು, ಯಾವಾಗ ಖರ್ಚು ಮಾಡಲಾಯಿತು, ಮತ್ತು ಯಾವ ಮೂಲದಿಂದ ಹಣ ಖರ್ಚಾಗಿದೆ,

ಇ) ಈ ವರ್ಷವಾದರೂ ಸದರಿ ಕ್ರೀಡಾಂಗಣವನ್ನು ಪೂರ್ತಿ ಮಾಡಲು ಅನುದಾನ ಪೂರೈಸಲಾಗುವುದೇ?

ಶ್ರೀ ಹನುಮಂತಪ್ಪ ವೈ, ಆಲ್ಕೋಡ್(ಯುವಜನಸೇವಾ ಹಾಗೂ ಕ್ರೀಡಾ ಸಚಿವರು)

ಅ) ಬಂದಿದೆ

ಆ) 2003–04 ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ರೂ 3 00 ಲಕ್ಷ ಅನುದಾನ ಹಾಗೂ ಜಿಲ್ಲಾಧಿಕಾರಿಗಳು, ಬಾಗಲಕೋಟೆ ಇವರು ಕೂಲಿಗಾಗಿ ಕಾಳು ಯೋಜನೆಯಡಿ ಬಿಡುಗಡೆಗೊಳಿಸಿದ ರೂ 10 00 ಲಕ್ಷ ಹಣ ಸೇರಿ ಒಟ್ಟು ರೂ 13 00 ಲಕ್ಷ ಖರ್ಚಾಗಿದೆ

ಇ) ಪ್ರಸ್ತುತ ಈ ಯೋಜನೆಯನ್ನು ಜಿಲ್ಲಾ ಪಂಚಾಯತ್‌ಗೆ ವರ್ಗಾಯಿಸಿರುವುದರಿಂದ ಪೂರ್ತಿ ಮಾಡಲು ಅನುದಾನವನ್ನು ಸ್ಥಳೀಯವಾಗಿ ಕ್ರೋಢೀಕರಿಸಿ ಪೂರೈಸಬೇಕಾಗಬಹುದು

1536 (1808) ಶ್ರೀ ಸೋಮಣ್ಣ ವಿ (ಬಿನ್ನಿಪೇಟೆ) – ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬ್ಯಾಟರಾಯನಪುರದ ಬಿ ಬಿ ಎಂ ಪಿ ವಲಯ ಕಛೇರಿಯನ್ನು ಸ್ಥಳಾಂತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ,

ಆ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು,

ಇ) ಈಗಾಗಲೇ ಈ ವಲಯ ಕಛೇರಿಯನ್ನು ಸ್ಥಳಾಂತರಿಸಲು ಜನತೆಯಿಂದ ತೀವ್ರ ವಿರೋಧ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ, ಈ ಪ್ರಸ್ತಾವನೆಯನ್ನು ಸರ್ಕಾರ ಕೂಡಲೇ ಕೈಬಿಡುತ್ತದೆಯೇ?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

1537 (1809) ಶ್ರೀ ಸೋಮಣ್ಣ ವಿ (ಬಿನ್ನಿಪೇಟೆ) – ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಪ್ರತಿ ದಿನ ಮಾರಾಟ ಮಾಡುತ್ತಿರುವ